**ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**

ಅ) ರಾಜ್ಯದಲ್ಲಿರುವ ಸರ್ಕಾರಿ ಸಂಯುಕ್ತ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳು ಎಷ್ಟು (ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ವಿವರ ನೀಡುವುದು);

ರಾಜ್ಯದಲ್ಲಿನ. ಸರ್ಕಾರಿ ಸಂಯುಕ್ತ ಪ್ರೌಢಶಾಲೆಗಳಲ್ಲಿ ಒಟ್ಟು 2311 ಶಿಕ್ಷಕರ ಹುದ್ದೆಗಳು ಖಾಲಿ ಇವೆ.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಸರ್ಕಾರಿ ಪ್ರೌಢಶಾಲೆಗಳಲ್ಲಿ ಈ ಕೆಳಕಂಡಂತೆ ಶಿಕ್ಷಕರ ಹುದ್ದೆಗಳು (ವಿಷಯವಾರು) ಖಾಲಿ ಇರುತ್ತದೆ:-

| ವಿಷಯ | ಖಾಲಿ ಹುದ್ದೆಗಳ ಸಂಖ್ಯೆ |
|---|---|
| ಆಂಗ್ಲ ಭಾಷಾ ಶಿಕ್ಷಕರು | 01 |
| ಹಿಂದಿ ಭಾಷಾ ಶಿಕ್ಷಕರು | 04 |
| ಭೌತ ವಿಜ್ಞಾನ ಶಿಕ್ಷಕರು | 02 |
| ಜೀವ ವಿಜ್ಞಾನ ಶಿಕ್ಷಕರು | 02 |
| ಕಲಾ ಶಿಕ್ಷಕರು | 01 |
| ದೈಹಿಕ ಶಿಕ್ಷಣ ಶಿಕ್ಷಕರು | 04 |
| **ಒಟ್ಟು** | **14** |

ಆ) ಈ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಧಕ್ಕೆಯಾಗದಂತೆ ಶಿಕ್ಷಕರನ್ನು ನಿಯೋಜಿಸಲಾಗಿದೆ. ಖಾಲಿ ಹುದ್ದೆಗಳನ್ನು ಬಡ್ತಿ ಮುಖಾಂತರ ಹಾಗೂ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುವುದು

ಇ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು;

ಶಿಕ್ಷಣ ಇಲಾಖೆಯ ಆಯುಕ್ತರಿಂದ ಪ್ರಸ್ತಾವನೆ ಬಂದಾಗ ಪರಿಶೀಲಿಸಿ ಕ್ರಮ ಜರುಗಿಸಲಾಗುವುದು.

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (328)346**
**ಸದಸ್ಯರ ಹೆಸರು : ಶ್ರೀ ಸುರೇಶ್ ಬಾಬು ಸಿ.ಬಿ**
**ಉತ್ತರಿಸುವ ಸಚಿವರು : (ಶ್ರೀ ಅರವಿಂದ ಲಿಂಬಾವಳಿ)**
**ಉನ್ನತ ಶಿಕ್ಷಣ ಸಚಿವರು**

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಸಂಖ್ಯೆ ಎಷ್ಟು;(ವಿಷಯವಾರು ವಿವರ ನೀಡುವುದು);

ಸದರಿ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗದಲ್ಲಿ ಎರಡು ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ.

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇಂತಹ ಕಾಲೇಜುಗಳ ವಿವಿಧ ವಿಷಯಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಕಾರ್ಯಭಾರವನ್ನು ನಿರ್ವಹಿಸುವ ಸಲುವಾಗಿ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಕಾಲೇಜುಗಳ ಪ್ರಾಂಶುಪಾಲರಿಗೆ ಅಧಿಕಾರ ನೀಡಲಾಗಿದೆ. ಅದಲ್ಲದೆ ಉಪನ್ಯಾಸಕರ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ತುಂಬಲು ಪ್ರಸ್ತಾವನೆ ಸಲ್ಲಿಸಿದ್ದು ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಇ) ಸದರಿ ಹುದ್ದೆಗಳನ್ನು ಎಂದು ಭರ್ತಿ ಮಾಡಲಾಗುವುದು?

ಕರ್ನಾಟಕ ಲೋಕ ಸೇವಾ ಆಯೋಗದಿಂದ ಅಭ್ಯರ್ಥಿಗಳ ಪಟ್ಟಿಗಳನ್ನು ಸ್ವೀಕರಿಸಿದ ನಂತರ ನೇಮಕಾತಿ ಮಾಡಲಾಗುವುದು.

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (291)300**
**ಸದಸ್ಯರ ಹೆಸರು : ಶ್ರೀ ಹ್ಯಾರೀಸ್ ಎನ್.ಎ**
**ಉತ್ತರಿಸುವ ಸಚಿವರು : (ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**

ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ವಿವಿಧ ಮಾಧ್ಯಮವಾರು ವಿವರ ನೀಡುವುದು;

**ಸರ್ಕಾರಿ ಪ್ರಾಥಮಿಕ ಶಾಲೆಗಳು**

| ಮಾಧ್ಯಮ | ಬೆಂಗಳೂರು ದಕ್ಷಿಣ ಜಿಲ್ಲೆ | ಬೆಂಗಳೂರು ಉತ್ತರ ಜಿಲ್ಲೆ |
|---|---|---|
| ಕನ್ನಡ | 1216 | 421 |
| ಆಂಗ್ಲ | 11 | – |
| ತಮಿಳು | 31 | 11 |
| ತೆಲುಗು | 08 | 08 |
| ಉರ್ದು | 178 | 71 |
| ಹಿಂದಿ | 01 | – |
| **ಒಟ್ಟು** | **1445** | **511** |